ಆ) ನೇರ ಸಾಲ ಯೋಜನೆ ಸ್ಥಗಿತಗೊಂಡಿಲ್ಲ ಚಾಮುಂಡೇಶ್ವರಿ ಕ್ಷೇತ್ರದಲ್ಲಿ 2006ರಲ್ಲಿ ಪ್ರತಿ ಫಲಾನುಭವಿಗೆ ರೂ 5,000/– ದಂತೆ ರೂ 2,500 ಸಹಾಯಧನ ಹಾಗೂ ರೂ 2,500 ಸಾಲದಂತೆ ಸೌಲಭ್ಯ ನೀಡಿದೆ ಇದಕ್ಕಾಗಿ ಒಟ್ಟು 1,48,50,000 ರೂ ಗಳನ್ನು ಸಾಲವಾಗಿ ನೀಡಿದೆ

ಇ) ನಿರೀಕ್ಷಿತ ಮಟ್ಟ ತಲುಪಿಲ್ಲದಿರುವುದು ನಿಜವಾದರೂ ನಿರೀಕ್ಷಿತ ಮಟ್ಟ ತಲುಪಲು ಅನೇಕ ವಿಧವಾದ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ

ಈ) ಉದ್ಭವಿಸುವುದಿಲ್ಲ

584(714) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗದಲ್ಲಿರುವ ಬಾಪೂಜಿ ಆಯುರ್ವೇದಿಕ್ ಕಾಲೇಜಿಗೆ ಸರ್ಕಾರದಿಂದ ಮಂಜೂರಾಗಿರುವ ವಿದ್ಯಾರ್ಥಿ ಸೀಟುಗಳ ಸಂಖ್ಯೆ ಹಾಗೂ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು (ಹುದ್ದೆವಾರು ವಿವರಗಳನ್ನು ಒದಗಿಸುವುದು)?

ಆ) ಈ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ನಿಯಮಗಳ ಪ್ರಕಾರ ಯಾವ ಯಾವ ಸೌಲಭ್ಯಗಳನ್ನು ಒದಗಿಸಲಾಗಿದೆ (ಪ್ರಯೋಗಾಲಯ, ಆಸ್ಪತ್ರೆ ಇತ್ಯಾದಿ)?

ಇ) ಈಗ ಕಾಲೇಜಿನಲ್ಲಿರುವ ವಿದ್ಯಾರ್ಥಿಗಳ ಹಾಗೂ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು?

ಈ) ಹೆಚ್ಚುವರಿಯಾಗಿರುವ ವಿದ್ಯಾರ್ಥಿಗಳು ಎಷ್ಟು ಹಾಗೂ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರಿದ್ದಾರೆಯೇ?

ಉ) ಹೆಚ್ಚುವರಿ ವಿದ್ಯಾರ್ಥಿಗಳ ಪ್ರವೇಶಕ್ಕೆ ಸರ್ಕಾರ ಅನುಮತಿ ನೀಡಿದೆಯೇ ಹಾಗೂ ಇವರಿಗೆ ಪರೀಕ್ಷೆಗೆ ಕುಳಿತುಕೊಳ್ಳಲು ಅನುಮತಿ ನೀಡಲಾಗಿದೆಯೇ?

ಊ) ಒಂದು ವೇಳೆ ಅನುಮತಿ ನೀಡದೇ ಇದ್ದಲ್ಲಿ ಇದಕ್ಕೆ ಕಾರಣಗಳೇನು?

ಋ) ಸದರಿ ಕಾಲೇಜಿನಲ್ಲಿ ಸರ್ಕಾರವು ನಿಗದಿಪಡಿಸಿರುವ ನಿಯಮಗಳನ್ನು ಉಲ್ಲಂಘನೆ ಮಾಡಿ ಅನುಮತಿ ನೀಡಿದ್ದಕ್ಕಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುವುದು ನಿಜವೇ?

ಎ) ಹಾಗಿದ್ದಲ್ಲಿ ಸರ್ಕಾರದ ನಿಯಮಗಳನ್ನು ಉಲ್ಲಂಘನೆ ಮಾಡಿರುವ ಮೇಲ್ಕಂಡ ಶಿಕ್ಷಣ ಸಂಸ್ಥೆಯ ಮೇಲೆ ಸರ್ಕಾರ ಕೈಗೊಳ್ಳುವ ಕ್ರಮವೇನು?

ಡಾ ವಿ ಎಸ್ ಆಚಾರ್ಯ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ಶಿವಮೊಗ್ಗದಲ್ಲಿರುವ ಬಾಪೂಜಿ ಆಯುರ್ವೇದ ಕಾಲೇಜಿನಲ್ಲಿರುವ ಪ್ರಥಮ ವರ್ಷದ ಬಿ ಎ ಎಂ ಎಸ್ ಕೋರ್ಸಿನ ಪ್ರವೇಶಕ್ಕೆ ಸರ್ಕಾರವು 40 ಸೀಟುಗಳನ್ನು ಮಂಜೂರು ಮಾಡಿರುತ್ತದೆ ಆದರೆ ಈ ಮಹಾವಿದ್ಯಾಲಯವು ಖಾಸಗಿ ಸಂಸ್ಥೆಯಾಗಿರುವುದರಿಂದ ಸಿಬ್ಬಂದಿ ವರ್ಗದ ಸಂಖ್ಯೆ ಮಂಜೂರು ಮಾಡುವುದು ಸರ್ಕಾರದಿಂದ ಅವಶ್ಯವಾಗಿರುವುದಿಲ್ಲ ಆದರೆ ಈ ಮಹಾವಿದ್ಯಾಲಯಕ್ಕೆ ಹೊಂದಿಕೊಂಡಿರುವ ಆಸ್ಪತ್ರೆಯಲ್ಲಿ 28 ವೈದ್ಯರುಗಳು, 16 ಶುಶ್ರೂಷಕರು ಹಾಗೂ 20 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಮಹಾವಿದ್ಯಾಲಯದಲ್ಲಿ 34 ಬೋಧನಾ ಸಿಬ್ಬಂದಿಗಳು (ಆಸ್ಪತ್ರೆಯ ವೈದ್ಯರುಗಳೂ ಸೇರಿದಂತೆ) ಹಾಗೂ 27 ಇತರೆ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಆ) ಸಿ ಸಿ ಐ ಎಂ ನವದೆಹಲಿ ಹಾಗೂ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವುಗಳ ಪ್ರಕಾರ ಈ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಬೇಕಾದ ಕನಿಷ್ಠ ಸೌಲಭ್ಯಗಳನ್ನು ಒದಗಿಸಲಾಗಿದೆ

ಇ) ಈ ಕಾಲೇಜಿನಲ್ಲಿ 214 ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದು, 34 ಬೋಧಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ

ಈ) ಈ ಮಹಾವಿದ್ಯಾಲಯದಲ್ಲಿ ನಿಗದಿಪಡಿಸಿರುವ ಪ್ರವೇಶ ಸಾಮರ್ಥ್ಯಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಇರುವುದಿಲ್ಲ ಶಿಕ್ಷಕ–ವಿದ್ಯಾರ್ಥಿಗಳ ಸಂಖ್ಯೆಯು ನಿಗಧಿತ ಅನುಪಾತಕ್ಕೆ ಸರಿ ಇದೆ

ಉ) ಇಲ್ಲ ಈ ಮಹಾವಿದ್ಯಾಲಯವು ಸರ್ಕಾರವು ನಿಗದಿಗೊಳಿಸದ ಪ್ರವೇಶ ಸಂಖ್ಯೆಗೆ ಸಮನಾಗಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿರುತ್ತದೆ

ಊ) ಉದ್ಭವಿಸುವುದಿಲ್ಲ

ಋ) ಇಲ್ಲ

ಎ) ಉದ್ಭವಿಸುವುದಿಲ್ಲ

585 (1058) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಟಿರಾದ್) ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದರಾಬಾದ್ ಕರ್ನಾಟಕ ಪ್ರದೇಶ ವ್ಯಾಪ್ತಿಯ ಜಿಲ್ಲೆಗಳಲ್ಲಿರುವ ಪಶುವೈದ್ಯ ಆಸ್ಪತ್ರೆ ಹಾಗೂ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು?